ವಿಸ್ತರಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ?

2. ಈ ಯೋಜನೆಯ ಅಗತ್ಯತೆಯನ್ನು ಸರ್ಕಾರ ಮನಗಂಡಿದೆಯೇ? ಹಾಗಿದ್ದಲ್ಲಿ ಎಂದಿನಿಂದ ಜಾರಿಗೆ ಬರಲಿದೆ?

## ಉತ್ತರ

1. ಇದೆ.

2. ಸರ್ಕಾರದ ಪರಿಶೀಲನೆಯಲ್ಲಿದೆ.

ಜಗಜ್ಯೋತಿ ಬಸವೇಶ್ವರ ಜನ್ಮಸ್ಥಳ ಬಸವನಬಾಗೇವಾಡಿಯನ್ನು ಅಭಿವೃದ್ಧಿಪಡಿಸುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 710(248)

**ಸದಸ್ಯರ ಹೆಸರು : ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ( ಬಸವನಬಾಗೇವಾಡಿ)**

**ಉತ್ತರಿಸುವ ಸಚಿವರು : ಶ್ರೀ ಆರ್.ರೋಷನ್ ಬೇಗ್( ಪ್ರವಾಸೋದ್ಯಮ ಮತ್ತು ಹಜ್ ಸಚಿವರು)**

## ಪ್ರಶ್ನೆ

1) ಜಗಜ್ಯೋತಿ ಬಸವೇಶ್ವರರ ಜನ್ಮಸ್ಥಳ ಐತಿಹಾಸಿಕ ಬಸವನ ಬಾಗೇವಾಡಿಯನ್ನು ಪ್ರವಾಸೋದ್ಯಮ ಇಲಾಖೆಯಿಂದ ಅಭಿವೃದ್ಧಿಪಡಿಸಲು ಹೊಸ ಯೋಜನೆಗಳೇನಾದರು ಸರ್ಕಾರದ ಮುಂದೆ ಇದೆಯೇ?

ಅ) ಇದಕ್ಕಾಗಿ ಸರ್ಕಾರ ನಿಗಧಿಪಡಿಸಲಾಗಿರುವ ಹಣ ಎಷ್ಟು? ಈ ಯೋಜನೆಯು ಈಗ ಯಾವ ಹಂತದಲ್ಲಿದೆ?

## ಉತ್ತರ

1) ಹೌದು. ಬಸವನಬಾಗೇವಾಡಿಯಲ್ಲಿ ಕೇಂದ್ರದ ನೆರವಿನೊಂದಿಗೆ ಪ್ರವಾಸಿಗರ ಅನುಕೂಲಕ್ಕಾಗಿ ಎರಡು ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಒದಗಿಸುವ ಯೋಜನೆಯನ್ನು ಕೈಗೆತ್ತಿಕೊಂಡಿದೆ. ಕೇಂದ್ರದ ನೆರವಿನೊಂದಿಗೆ ಯಾತ್ರಿನಿವಾಸ ನಿರ್ಮಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

2) 1) ಎರಡು ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗೆ ತಗಲುವ ವೆಚ್ಚ ರೂ.18,50,000-00 ಆಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.

2) ರೂ.70,00,000-00ಗಳ ಅಂದಾಜು ವೆಚ್ಚದಲ್ಲಿ ಯಾತ್ರಿನಿವಾಸ ನಿರ್ಮಿಸುವ ಯೋಜನೆಗೆ ಪ್ರಸುತ್ತ ಸಾಲಿನ ಕೇಂದ್ರದ ನೆರವಿನ ಆದ್ಯತಾ ಪಟ್ಟಿಯಲ್ಲಿ ಸೇರಿಸಲಾಗಿದೆ. ಈ ಯೋಜನೆಗೆ ಕೇಂದ್ರ ಸರ್ಕಾರವನ್ನು ಹಣ ಬಿಡುಗಡೆ ಮಾಡುವಂತೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ನಾಗಮಂಗಲ-ಸಂತೆಬಾಚಹಳ್ಳಿ-ಕೆ.ಆರ್.ಪೇಟೆ ರಸ್ತೆಯ ಅಭಿವೃದ್ಧಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 711(922)

**ಸದಸ್ಯರ ಹೆಸರು : ಶ್ರೀ ಚಲುವರಾಯ ಸ್ವಾಮಿ ಎನ್.(ನಾಗಮಂಗಲ)**

**ಉತ್ತರಿಸುವ ಸಚಿವರು : ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)**

## ಪ್ರಶ್ನೆ

1. ನಾಗಮಂಗಲ-ಸಂತೆಬಾಚಹಳ್ಳಿ-ಕೆ.ಆರ್.ಪೇಟೆ ರಸ್ತೆಯು ದುಸ್ಥಿತಿಯಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2. ಕಳೆದ 3 ವರ್ಷಗಳಲ್ಲಿ ಈ ರಸ್ತೆಯ ಅಭಿವೃದ್ಧಿಗೆ ಮಾಡಿರುವ ವೆಚ್ಚ ಎಷ್ಟು? ಕೈಗೊಂಡ ಅಭಿವೃದ್ಧಿ ಕಾರ್ಯಗಳು ಯಾವುವು?

3. ಈ ವರ್ಷ ಈ ರಸ್ತೆಯು ಅಭಿವೃದ್ಧಿ ಕಾಯ್ದಿರಿಸಿರುವ ಹಣ ಎಷ್ಟು? ಯೋಜಿತ ಅಭಿವೃದ್ಧಿ ಕಾರ್ಯಗಳು ಯಾವುವು?

## ಉತ್ತರ

1. ಈ ಜಿಲ್ಲಾ ಮುಖ್ಯರಸ್ತೆಯ ದುರಸ್ತಿಯ ಅವಶ್ಯಕತೆ ಸರ್ಕಾರದ ಗಮನಕ್ಕೆ ಬಂದಿದೆ.

2. ಕಳೆದ 3 ವರ್ಷಗಳಲ್ಲಿ ಅಂದರೆ 1998-99 ರಿಂದ 2000-01ರವರೆಗೆ ಸದರಿ ಜಿಲ್ಲಾ ಮುಖ್ಯ ರಸ್ತೆಯಲ್ಲಿ 6.60 ಕಿಮೀ.ಗಳಿಗೆ ಜಲ್ಲಿ ಬಿಚಾವಣೆ, 3.27 ಕಿಮೀ.ಗಳಿಗೆ ಡಾಂಬರೀಕರಣ, 12 ಅಡ್ಡಮೋರಿಗಳ ದುರಸ್ತಿ ಹಾಗೂ 1 ಸೇತುವೆ ನಿರ್ಮಾಣವನ್ನು ಒಟ್ಟಾರೆ ರೂ.62.99 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲಾಗಿರುತ್ತದೆ.